## ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ನವದೆಹಲಿಯ ಕರ್ನಾಟಕ ಭವನದ ಸಿಬ್ಬಂದಿಗೆ ನೀಡುತ್ತಿರುವ ಹೊರ ರಾಜ್ಯ ಭತ್ಯೆಯ ದರದ ಪರಿಷ್ಕರಣೆಯ ಬಗ್ಗೆ.

ಓದಲಾಗಿದೆ:-

(1) ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 31 ಎಸ್‌ಆರ್‌ಪಿ 2007 (VII) ದಿನಾಂಕ 14-8-2008.
(2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 26 ಎಚ್‌ಎಂಬಿ 2010 ದಿನಾಂಕ: 30-9-2011.
(3) ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2012(V) ದಿನಾಂಕ: 14-6-2012.

ಪ್ರಸ್ತಾವನೆ:

2011ರ ಅಧಿಕಾರಿ ವೇತನ ಸಮಿತಿಯು ರಾಜ್ಯದಿಂದ ಹೊರಗೆ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ನೀಡುತ್ತಿರುವ ಹೊರ ರಾಜ್ಯ ಭತ್ಯೆಯ ದರಗಳನ್ನು ಪರಿಷ್ಕರಿಸಲು ಶಿಫಾರಸ್ಸು ಮಾಡಿದ್ದ ಹಿನ್ನೆಲೆಯಲ್ಲಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ: 14-6-2012ರ ಸರ್ಕಾರಿ ಆದೇಶದಲ್ಲಿ ನವದೆಹಲಿಯ ಕರ್ನಾಟಕ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ 2012ರ ಪರಿಷ್ಕೃತ ವೇತನ ಶ್ರೇಣಿಯ ಮೂಲ ವೇತನದ ಶೇಕಡ 25ರಷ್ಟು ಹೊರ ರಾಜ್ಯ ಭತ್ಯೆಯನ್ನು ಮಂಜೂರು ಮಾಡಲಾಗಿತ್ತು.

ಪ್ರಸ್ತುತ ನವದೆಹಲಿಯ ಕರ್ನಾಟಕ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಪರಿಷ್ಕೃತ ವೇತನ ಶ್ರೇಣಿ 2012ರ ಮೂಲವೇತನದ ಶೇಕಡ 25ರ ಹೊರ ರಾಜ್ಯ ಭತ್ಯೆಯ ದರವನ್ನು ಶೇಕಡ 35ಕ್ಕೆ ಹೆಚ್ಚಿಸುವಂತೆ ನಿವಾಸಿ ಆಯುಕ್ತರು, ನವದೆಹಲಿ ಇವರು ಕೋರಿರುವ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 31 ಎಸ್‌ಆರ್‌ಪಿ 2013**
**ಬೆಂಗಳೂರು, ದಿನಾಂಕ 16ನೇ ಜನವರಿ 2014**

ನವದೆಹಲಿಯ ಕರ್ನಾಟಕ ಭವನದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ಪ್ರಸ್ತುತ ನೀಡಲಾಗುತ್ತಿರುವ ಹೊರರಾಜ್ಯ ಭತ್ಯೆಯ ದರವನ್ನು 2012ರ ಪರಿಷ್ಕೃತ ವೇತನ ಶ್ರೇಣಿಯ ಮೂಲ ವೇತನದ ಶೇಕಡ 25ರಿಂದ ಶೇಕಡ 35ಕ್ಕೆ ಭವಿಷ್ಯಾವರ್ತಿಯಾಗಿ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಭತ್ಯೆಯನ್ನು ಮಂಜೂರು ಮಾಡಲು ವಿಧಿಸಿರುವ ಇತರೆ ಷರತ್ತುಗಳು ಯಾವುದೇ ಬದಲಾವಣೆ ಇಲ್ಲದೆ ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸುಂದರ ರಾಜ ಗುಪ್ತ)
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು
2. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
3. ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ) ಪ್ರಕರಣ ಸಂಖ್ಯೆ:ಸಿ 867/13, ವಿಧಾನಸೌಧ, ಬೆಂಗಳೂರು.
5. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ರಾಜ್ಯ ಶಿಷ್ಟಾಚಾರ) ವಿಧಾನ ಸೌಧ, ಬೆಂಗಳೂರು.
11. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
12. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
13. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
15. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ **www.finance.kar.nic.in** ವೀಕ್ಷಿಸಿ.